ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1487
ಸದಸ್ಯರ ಹೆಸರು : ಶ್ರೀ ಕೆ.ಎ.ತಿಪ್ಪೇಸ್ವಾಮಿ
ಉತ್ತರಿಸುವ ದಿನಾಂಕ : 24-09-2021
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕು ಕೇಂದ್ರದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನಿರ್ಮಾಣ ಮಾಡುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಅವು ಯಾವುವು;	ಬಂದಿದೆ. 2018-19ನೇ ಸಾಲಿನಲ್ಲಿ ತುಮಕೂರು ಜಿಲ್ಲೆ, ಪಾವಗಡ ತಾಲ್ಲೂಕು ವ್ಯಾಪ್ತಿಯಲ್ಲಿ ಇಲಾಖೆಯ ವತಿಯಿಂದ ನಡೆಸುತ್ತಿರುವ ಈ ಕೆಳಕಂಡ 05 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಪ್ರಾರಂಭಿಸಲಾಗಿರುತ್ತದೆ.

ರೂ.ಲಕ್ಷಗಳಲ್ಲಿ

ಕ್ರ. ಸಂ.	ವಿದ್ಯಾರ್ಥಿ ನಿಲಯದ ವಿವರ	ಮಂಜೂರಾತಿ ಮೊತ್ತ
1	ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್.	514.00
2	ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ಪದವಿ ಕಾಲೇಜು ವಿದ್ಯಾರ್ಥಿ ನಿಲಯ, ಪಾವಗಡಟೌನ್.	471.00
3	ಸರ್ಕಾರಿ ಪದವಿ ಪೂರ್ವಕಾಲೇಜು ವಿದ್ಯಾರ್ಥಿ ನಿಲಯ, ಪಾವಗಡಟೌನ್.	471.00
4	ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್.	620.00
5	ಸರ್ಕಾರಿ ಪ್ರಥಮದರ್ಜೆಕಾಲೇಜು ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್.	620.00
	ಒಟ್ಟು	2696.00

(ಆ)	ಈ ವಿದ್ಯಾರ್ಥಿನಿಲಯಗಳು ಪ್ರಸ್ತುತ ಶಾಲಾ-ಕಾಲೇಜುಗಳಿಂದ 4-5 ಕಿಲೋಮೀಟರ್ ಅಂತರದಲ್ಲಿ ನಿರ್ಮಾಣವಾಗುತ್ತಿರುವುದು ನಿಜವೇ: ಇದರಿಂದ ವಿದ್ಯಾರ್ಥಿಗಳು ಅಭ್ಯಸಿಸುತ್ತಿರುವ ಶಾಲಾ-ಕಾಲೇಜುಗಳಿಂದ ಇಷ್ಟು ಅಂತರದ ವಿದ್ಯಾರ್ಥಿ ನಿಲಯಗಳಿಗೆ ದಿನದಲ್ಲಿ 2-3 ಬಾರಿಯಾದರೂ ಹೋಗಿ ಬರಬೇಕು ಎಂದರೆ. ಪ್ರಯಾಸವಾಗುತ್ತದೆ ಎಂಬುದನ್ನು ಸರ್ಕಾರ ಮನಗಂಡಿಲ್ಲವೇ:	ಪಾವಗಡ ತಾಲ್ಲೂಕಿನ ಕಣಿವೇಹಳ್ಳಿ ಸಮೀಪವಿರುವ ಸರ್ವೆ ನಂ.22 ರಲ್ಲಿ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರು ಮಂಜೂರು ಮಾಡಿರುವ 01 ಎಕರೆ 20 ಗುಂಟೆ ಜಮೀನಿನಲ್ಲಿ ಮೇಲ್ಕಂಡ 05 ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ. ಈ ಸಂಬಂಧವಾಗಿ, ದಿನಾಂಕ:17-07-2021 ರಂದು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆಸಲಾದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮೇಲ್ಕಂಡ ಕಟ್ಟಡ ಕಾಮಗಾರಿಗಳ ಬಗ್ಗೆ ಪರಿಶೀಲಿಸಲಾಗಿದ್ದು, ಪ್ರಾರಂಭಿಕ ಹಂತದಲ್ಲಿ 3 ಕೊಳವೆ ಬಾವಿಗಳನ್ನು ಕೊರೆಯಲಾಗಿದ್ದು ತಳಪಾಯವನ್ನು ನಿರ್ಮಿಸುವ ಬಗ್ಗೆ ಈಗಾಗಲೇ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದ್ದು, ರೂ. 34.24 ಲಕ್ಷಗಳನ್ನು ವೆಚ್ಚ ಮಾಡಲಾಗಿರುವುದರಿಂದ ಹಾಗೂ ಈ ಸ್ಥಳವು ಮುಖ್ಯ ರಸ್ತೆಗೆ ಹೊಂದಿಕೊಂಡಿರುವುದರಿಂದ ವಿದ್ಯಾರ್ಥಿಗಳು ಶಾಲೆ-ಕಾಲೇಜುಗಳಿಗೆ ಹೋಗಿ ಬರುವುದಕ್ಕೆ ಅನುಕೂಲವಾಗುತ್ತದೆ. ಆದುದರಿಂದ ಇಲ್ಲಿಯೇ ಕಟ್ಟಡಗಳನ್ನು ನಿರ್ಮಿಸುವುದು ಸೂಕ್ತವೆಂದು ತೀರ್ಮಾನ ತೆಗೆದುಕೊಳ್ಳಲಾಗಿದೆ. ಅದರಂತೆ ಕಾಮಗಾರಿಗಳು ಪ್ರಗತಿಯಲ್ಲಿವೆ. ಆದಾಗ್ಯೂ ಸಹ ಸಾಧ್ಯತೆ/ ಅಗತ್ಯತೆ ಬಗ್ಗೆ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರಿಂದ ವರದಿಯನ್ನು ಪಡೆದು ಪರಿಶೀಲಿಸಲಾಗುವುದು.
(ಇ)	ಹಾಲಿ ನಿರ್ಮಾಣವಾಗುತ್ತಿರುವ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾರ್ಯಗಳನ್ನು ಸ್ಥಗಿತಗೊಳಿಸಿ, ಚಳ್ಳಕೆರೆ ಮತ್ತು ಕಲ್ಯಾಣದುರ್ಗ ರಸ್ತೆಗಳಲ್ಲಿ ಅನೇಕ ವಸತಿ ಪ್ರದೇಶಗಳು ಅಭಿವೃದ್ಧಿ ಆಗಿದ್ದು, ಅಲ್ಲಿನ ಸೂಕ್ತ ಜಾಗದಲ್ಲಿ ಅಥವಾ ಶಾಲಾ-ಕಾಲೇಜುಗಳಿಂದ ಕೇವಲ ಒಂದು ಕಿಲೋಮೀಟರ್ ಅಂತರದಲ್ಲಿರುವ ಪಾವಗಡ ಸರ್ವೆ ನಂ.178 ರಲ್ಲಿರುವ ಸುಮಾರು 13 ಎಕರೆ ಖರಾಬು ಜಮೀನಿನಲ್ಲಿ, ಈ ವಿದ್ಯಾರ್ಥಿ ನಿಲಯಗಳ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಂಡು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಸ್ಥಳೀಯರ ಅಪೇಕ್ಷೆಯಂತೆ ಸರ್ಕಾರ ಮರುಪರಿಶೀಲಿಸಿ, ಕೂಡಲೇ ಈ ಬಗ್ಗೆ ಕಾರ್ಯೋನ್ಮುಖವಾಗುವುದೇ? (ಸಂಪೂರ್ಣ ವಿವರ ನೀಡುವುದು)	

ಸಕಇ 343 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು.